# <u>ದಿವಾಣಿ ನ್ಯಾಯಾಲಯ ಮತ್ತು ಜೆ. ಎಮ್. ಎಫ್. ಸಿ. ನ್ಯಾಯಾಲಯ, ಜೇವರ್ಗಿ</u>

<u>ಸಿಸಿ ನಂ. **486/2016**</u>

<u>ಚಾಸಾ- **4 /**ಪಿಡಬ್ಲೂ**- 1**</u>

| | |
|---|---|
| **ಹೆಸರು** | ಮಲ್ಲಣ್ಣಗೌಡ |
| **ತಂದೆ ಹೆಸರು** | ಗೊಲ್ಲಾಳಪ್ಪಗೌಡ |
| **ವಯಸ್ಸು** | 50 ವರ್ಷಗಳು |
| **ಉದ್ಯೋಗ** | ಒಕ್ಕಲುತನ |
| **ವಾಸ ಸ್ಥಳ** | ಬಿರಾಳ ಹಿಸ್ಸಾ |

<u>ದಿನಾಂಕ **14-02-2023** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.</u>

**<u>ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ಚಾಸಾ-1 ಮತ್ತು 5 ನನಗೆ ಗೊತ್ತು. ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸಾಕ್ಷಿಯು ಸ್ಥಳ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಯನ್ನು ನಿಪಿ-4 ಎಂದು ಮತ್ತು ಸಾಕ್ಷಿಯ ಸಹಿಯನ್ನು ನಿಪಿ-4(ಎ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಸಿಂದಗಿ-ಶಹಾಪೂರ ರಸ್ತೆಯ ಬಿರಾಳ ಹತ್ತಿರ ಮಾಡಿರುತ್ತೇನೆ. ಪೊಲೀಸರು ಯಾವ ವಿಚಾರಕ್ಕೆ ಸದರಿ ಸಹಿ ಪಡೆದುಕೊಂಡರು ಎಂದು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲಿಗೆ ಸ.ಸ.ಅರವರು ಅನುಮತಿಯನ್ನು ಕೋರಿರುತ್ತಾರೆ. ಅನುಮತಿ ನೀಡಲಾಯಿತು.)**

**<u>ಪಾಟೀ ಸವಾಲುಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ</u>**

ದಿನಾಂಕ 15-01-2018 ರಂದು ಬೆಳಿಗ್ಗೆ 11-15 ರಿಂದ 12-15 ಗಂಟೆಯವರೆಗೆ ನನ್ನ ಹಾಗೂ ಚಾಸಾ-5 ರವರ ಸಮಕ್ಷಮ ಸಿಂದಗಿ-ಶಹಾಪೂರ ರಸ್ತೆಯ ಬಿರಾಳ ಹತ್ತಿರ ಪೋಲಿಸರು ಪಂಚನಾಮೆ ಜರುಗಿಸಿದರು ಎಂದರೆ ಸರಿಯಲ್ಲ. ಸದರಿ ಪಂಚನಾಮೆಯನ್ನು ಅಪಘಾತದ ವಿಚಾರವಾಗಿ ಜರುಗಿಸಲಾಯಿತು ಎಂದರೆ ಸರಿಯಲ್ಲ. ಎಲ್ಲಾ ವಿಚಾರ ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಲು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಇರುವುದಿಲ್ಲ.</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ.ಇದೆ.

ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳು
ಜೇವರ್ಗಿ

# ದಿವಾಣಿ ನ್ಯಾಯಾಲಯ ಮತ್ತು ಜೆ. ಎಮ್. ಎಫ್. ಸಿ. ನ್ಯಾಯಾಲಯ, ಜೇವರ್ಗಿ

**ಸಿಸಿ ನಂ. 486/2016**

**ಚಾಸಾ- 5 /ಪಿಡಬ್ಲ್ಯೂ- 2**

| | |
|---|---|
| **ಹೆಸರು** | ಹುಸೇನಬಾಶಾ |
| **ತಂದೆ ಹೆಸರು** | ಅಲಿಸಾಬ |
| **ವಯಸ್ಸು** | 50 ವರ್ಷಗಳು |
| **ಉದ್ಯೋಗ** | ಒಕ್ಕಲುತನ |
| **ವಾಸ ಸ್ಥಳ** | ಬಿರಾಳ ಹಿಸ್ಸಾ |

ದಿನಾಂಕ **14-02-2023** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸಹಾಯಕ ಸರ್ಕಾರಿ ಅಭಿಯೋಜಕರಿಂದಃ**

ಚಾಸಾ-1 ಮತ್ತು 4 ನನಗೆ ಗೊತ್ತು. ಈಗ ನಾನು ಒಂದು ದಾಖಲೆ ನೋಡುತ್ತಿದ್ದು ಅದರಲ್ಲಿ ನನ್ನ ಸಹಿ ಇರುತ್ತದೆ. ಸಾಕ್ಷಿಯು ಸ್ಥಳ ಪಂಚನಾಮೆಯಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿರುತ್ತಾರೆ. ಸದರಿ ದಾಖಲೆಯನ್ನು ಈಗಾಗಲೇ ನಿಪಿ-4 ಎಂದು ಗುರುತಿಸಲಾಗಿರುತ್ತದೆ. ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು 7 ವರ್ಷಗಳ ಹಿಂದೆ ಬಿರಾಳ ಹಿಸ್ಸಾ ಕ್ರಾಸ್ ಹತ್ತಿರ ಅಪಘಾತವಾದ ವಿಚಾರವಾಗಿ ಮಾಡಿರುತ್ತೇನೆ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದ ಃ**

ಪೊಲೀಸರು ಸ್ಥಳಕ್ಕೆ ಬೆಳಿಗ್ಗೆ 7 - 8 ಗಂಟೆಗೆ ಬಂದಿದ್ದರು. ಪಂಚನಾಮೆಯನ್ನು ಎಷ್ಟು ಗಂಟೆಯಿಂದ ಎಷ್ಟು ಗಂಟೆಯವರೆಗೆ ಜರುಗಿಸಿದರು ಎಂದು ನನಗೆ ನೆನಪಿಲ್ಲ. ಪೊಲೀಸರು ಬಂದಾಗ ನಾನು ಬಿರಾಳ ಹಿಸ್ಸಾ ಕ್ರಾಸ್ ನಲ್ಲಿದ್ದೆ. ಪಂಚನಾಮೆ ಜರುಗಿಸಿದ ಸ್ಥಳದ ಚೆಕ್ ಬಂದಿ ಪೂರ್ವಕ್ಕೆ ಶಹಾಪೂರ ರಸ್ತೆ, ಪಶ್ಚಿಮಕ್ಕೆ ಸಿಂದಗಿ ರಸ್ತೆ, ಉತ್ತರಕ್ಕೆ ಶಿವಲಿಂಗಪ್ಪಗೌಡರ ಹೊಲ ಮತ್ತು ದಕ್ಷಿಣಕ್ಕೆ ಪಂಚರ್ ಅಂಗಡಿ ಇರುತ್ತದೆ. ಪಂಚನಾಮೆಯಲ್ಲಿ ಏನು ಬರೆದಿದ್ದಾರೆ ಎಂದು ನನಗೆ ಗೊತ್ತಿಲ್ಲ. ಚಾಸಾ-1 ರವರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಃ ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು)
ಓ.ಹೇ.ಕೆ.ಸರಿ.ಇದೆ.

ಪ್ರ.ದ.ನ್ಯಾಯಿಕ ದಂಡಾಧಿಕಾರಿಗಳು
ಜೇವರ್ಗಿ